## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1103 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 23.02.2024 |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ ಜಿಲ್ಲೆಯಲ್ಲಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ 2020-21 ರಿಂದ 2022-23ರವರೆಗೆ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮವೇನು; | ಬಂದಿದೆ.<br><br>ಈ ಸಂಬಂಧ ತನಿಖೆ ನಡೆಸಲು ಇಲಾಖೆಯ ಹಿರಿಯ ಅಧಿಕಾರಿಗಳನ್ನೊಳಗೊಂಡ ಉನ್ನತಮಟ್ಟದ ತನಿಖಾ ಸಮಿತಿಯನ್ನು ರಚಿಸಲಾಗಿದೆ. |
| ಆ) | ಜಿಲ್ಲಾ ಕೆಡಿಪಿ ಹಾಗೂ ದಿಶಾ ಸಮಿತಿ ಸಭೆಯಲ್ಲಿ ಚರ್ಚೆಯಾಗಿ ಉನ್ನತ ಮಟ್ಟದ ತನಿಖೆ ನಡೆಸುವಂತೆ ಸರ್ಕಾರಕ್ಕೆ ಪತ್ರ ಬರೆಯುವಂತೆ ನಿರ್ಣಯಿಸಲಾಗಿದ್ದು, ಅದರಂತೆ ಜಿಲ್ಲಾಡಳಿತ ಸರ್ಕಾರಕ್ಕೆ ಪತ್ರ ಬರೆಯಲಾಗಿದೆಯೇ ಆ ಪತ್ರದ ಮೇಲೆ ಯಾವ ಕ್ರಮಕೈಗೊಳ್ಳಲಾಗಿದೆ. | ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬೀದರ್ ಇವರು ಪ್ರಕರಣದ ಸಂಬಂಧ ರಾಜ್ಯ ಮಟ್ಟದಿಂದಲೇ ಉನ್ನತ ಮಟ್ಟದ ತನಿಖಾ ಸಮಿತಿ ರಚಿಸುವಂತೆ ದಿನಾಂಕ:22.11.2023ರ ಪತ್ರದಲ್ಲಿ ಕೋರಿದ್ದರು. ಈ ಮಧ್ಯೆ ದಿನಾಂಕ:02.08.2023ರ ಆದೇಶದಲ್ಲಿ ಇಲಾಖೆಯ ಹಿರಿಯ ಅಧಿಕಾರಿಗಳನ್ನೊಳಗೊಂಡ ಉನ್ನತ ಮಟ್ಟದ ತನಿಖಾ ಸಮಿತಿಯನ್ನು ರಚಿಸಿ ಈಗಾಗಲೇ ಆದೇಶಿಸಲಾಗಿದೆ |
| ಇ) | ಈ ಬಗ್ಗೆ ತನಿಖೆ ಮಾಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ ಹಾಗಿದ್ದಲ್ಲಿ, ತನಿಖೆಯ ಪ್ರಗತಿ ಯಾವ ಹಂತದಲ್ಲಿದೆ; | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಹಿರಿಯ ಅಧಿಕಾರಿಗಳನ್ನೊಳಗೊಂಡ ಉನ್ನತಮಟ್ಟದ ತನಿಖಾ ಸಮಿತಿಯು ತನಿಖಾ ವರದಿಯನ್ನು ಸಲ್ಲಿಸಿದ್ದು, ಸದರಿ ತನಿಖಾ ವರದಿಯನ್ನು ಪರಿಶೀಲಿಸಿ ಕ್ರಮವಹಿಸಲಾಗುವುದು. |
| ಈ) | ಅಕ್ರಮವೆಸಗಿದ್ದ ಅಧಿಕಾರಿಗಳಿಗೆ ಪದೋನ್ನತಿ ನೀಡಿ ಕೇಂದ್ರ ಕಚೇರಿಯಲ್ಲಿ ಉಳಿಸಿಕೊಳ್ಳುವ ಹಾಗೂ ಬೆಂಬಲ ನೀಡುವ ಹುನ್ನಾರು ಏನಾದರೂ ಇದೆಯೇ? | ಅಕ್ರಮವೆಸಗಿದ್ದ ಅಧಿಕಾರಿಗಳಿಗೆ ಪದೋನ್ನತಿ ನೀಡಿ ಕೇಂದ್ರ ಕಛೇರಿಯಲ್ಲಿ ಉಳಿಸಿಕೊಳ್ಳುವ ಹಾಗೂ ಬೆಂಬಲ ನೀಡುವ ಯಾವುದೇ ಹುನ್ನಾರ ಇರುವುದಿಲ್ಲ. |

**ಸಂಖ್ಯೆ:ಮಮಇ 76 ಎಸ್.ಜೆ.ಡಿ 2024**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖಾ ಸಚಿವರು.